ಸ್ಥಾಪನೆ : 1966
ನೋಂದಣಿ ಸಂಖ್ಯೆ : ಡಿ.ವೈ.ಆರ್.443

ಪ್ರಧಾನ ಕಛೇರಿ : 080-23151204, 23152073
ಬಸವೇಶ್ವರನಗರ ಶಾಖೆ : 080-23231238, 23232587
ಅನ್ನಪೂರ್ಣೇಶ್ವರಿನಗರ ಶಾಖೆ : 080-23183734
e-mail : contact@rcbl.co
Website: www.rcbl.co

# ದಿ ರಾಜಾಜಿನಗರ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್

ನಂ-741, 3ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು – 560010

## 56ನೇ ಸರ್ವಸದಸ್ಯರ ಸಭೆಯ ಸೂಚನಾ ಪತ್ರ

ದಿನಾಂಕ **31/03/2023** ಕ್ಕೆ ಮುಕ್ತಾಯಗೊಂಡ ಬ್ಯಾಂಕಿನ **(2022-23ನೇ ಸಾಲಿನ) 56 ನೇ ವಾರ್ಷಿಕ ಸರ್ವಸದಸ್ಯರ ಮಹಾಸಭೆಯನ್ನು** ದಿನಾಂಕ **17/09/2023** ರಂದು ಭಾನುವಾರ ಬೆಳಗ್ಗೆ 09-30 ಘಂಟೆಗೆ **ಬ್ಯಾಂಕಿನ ಗೌರವ ಅಧ್ಯಕ್ಷರಾದ ಶ್ರೀ. ಕೆ.ಎಲ್. ತಿಮ್ಮಪ್ಪ ಇವರ ಅಧ್ಯಕ್ಷತೆಯಲ್ಲಿ "ಶ್ರೀ ರಾಜರಾಜೇಶ್ವರಿ ಕಲ್ಯಾಣ ಮಂಟಪ" ಡಾ|| ರಾಜ್‌ಕುಮಾರ್ ರಸ್ತೆ, 2ನೇ ವಿಭಾಗ, ರಾಜಾಜಿನಗರ, ಬೆಂಗಳೂರು-560010** ಈ ವಿಳಾಸದಲ್ಲಿ ನಡೆಸಲಾಗುವುದು. ಸದಸ್ಯರು ಅನುವು ಮಾಡಿಕೊಂಡು ಸಭೆಗೆ ಸಕಾಲಕ್ಕೆ ಆಗಮಿಸಬೇಕೆಂದು ಕೋರಲಾಗಿದೆ.

### ಕಾರ್ಯಕ್ರಮಗಳು

1. ಜ್ಯೋತಿ ಬೆಳಗಿಸುವ ಮೂಲಕ ಸಭೆಯ ಉದ್ಘಾಟನೆ
2. ಪ್ರಾರ್ಥನೆ
3. ಅಧ್ಯಕ್ಷರಿಂದ ಸ್ವಾಗತ ಭಾಷಣ
4. ಚಿರಸ್ಮರಣೆ.
5. ಸರ್ವಸದಸ್ಯರ ಸಭೆಯ ಮೀಟಿಂಗ್ ನೋಟಿಸನ್ನು ಓದುವುದು.
6. 2021-22ನೇ ಸಾಲಿನ ಸರ್ವಸದಸ್ಯರ ಸಭೆಯ ನಡೆವಳಿಗಳನ್ನು ಓದಿ ದಾಖಲು ಮಾಡುವುದು.
7. 2022-23ನೇ ಸಾಲಿನ ಕಾರ್ಯಕಾರಿ ಸಮಿತಿಯ ವಾರ್ಷಿಕ ವರದಿಯ ಅಂಗೀಕಾರ
8. 2022-23ನೇ ಸಾಲಿನ ಪರಿಶೋಧಿಸಲ್ಪಟ್ಟ ಲೆಕ್ಕಪತ್ರಗಳು ಹಾಗೂ ಲೆಕ್ಕಪರಿಶೋಧನಾ ವರದಿಯ ಅಂಗೀಕಾರ.
9. 2022-23ನೇ ಸಾಲಿನ ನಿವ್ವಳ ಲಾಭದ ಹಂಚಿಕೆ.
10. 2022-23ನೇ ಸಾಲಿನ ಅಂದಾಜು ಮಾಡಿದ ವೆಚ್ಚಕ್ಕಿಂತ ಹೆಚ್ಚುವರಿಯಾದ ವೆಚ್ಚಕ್ಕೆ ಅನುಮೋದನೆ.
11. 2023-24ನೇ ಸಾಲಿನ ಅಂದಾಜು ಆಯ-ವ್ಯಯಗಳ ಅಂಗೀಕಾರ
12. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ನಿರ್ದೇಶಕರು ಪಟ್ಟಿ ಮಾಡಿರುವ 2023-24ನೇ ಸಾಲಿಗೆ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಿಸುವ ಬಗ್ಗೆ (ಆರ್.ಬಿ.ಐ.) ರವರ ಅನುಮತಿಗೊಳಪಟ್ಟು)
13. ಸದಸ್ಯರುಗಳಿಂದ ಬಂದ ವಿಷಯಗಳ ಪರಿಶೀಲನೆ.
14. ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಬೇಕಾದ ಇತರೆ ವಿಷಯಗಳು.
15. ವಂದನಾರ್ಪಣೆ.

ಸ್ಥಳ : ಬೆಂಗಳೂರು
ದಿನಾಂಕ : 31/08/2023

**ಕಾರ್ಯಕಾರಿ ಮಂಡಳಿ ಆಜ್ಞೆಯ ಮೇರೆಗೆ.**

**ಸಹಿ/-**

**(ಅನುಷ. ಎಂ. ಎನ್)**

**ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಪ್ರ).**

## ವಿಶೇಷ ಸೂಚನೆ

1) ಸದಸ್ಯರು ವಾರ್ಷಿಕ ವರದಿ ಪುಸ್ತಕವನ್ನು ದಿನಾಂಕ 11/09/2023 ರಿಂದ ಬ್ಯಾಂಕಿನ ಕೆಲಸದ ವೇಳೆಯಲ್ಲಿ ಪಡೆಯಬಹುದು.

2) ಬ್ಯಾಂಕಿಗೆ ಬಂದು ಪಡೆಯಲು ಸಾಧ್ಯವಾಗದ ಸದಸ್ಯರು ಬ್ಯಾಂಕಿನ ವೆಬ್‌ಸೈಟ್ www.rcbl.co ರಲ್ಲಿ ಪ್ರಚುರಗೊಳಿಸಿರುವ ವಾರ್ಷಿಕ ವರದಿಯನ್ನು ಓದಬಹುದು.

3) ವಿಷಯ 13 ಕ್ಕೆ ಸಂಬಂಧಿಸಿದಂತೆ ಸರ್ವಸದಸ್ಯರ ಸಭೆಯಲ್ಲಿ ಚರ್ಚಿಸಲು ಇಚ್ಛೆಯುಳ್ಳ ಸದಸ್ಯರು ದಿನಾಂಕ 14/09/2023 ರ ಒಳಗೆ ಚರ್ಚಿಸಬೇಕಾದ ವಿಷಯದ ಬಗ್ಗೆ ಲಿಖಿತ ಪತ್ರವನ್ನು ವ್ಯವಸ್ಥಾಪಕರು/ಮುಖ್ಯ ಕಾರ್ಯನಿರ್ವಹಣಾಧಿಕಾರಿರವರಿಗೆ ಸಲ್ಲಿಸಬಹುದಾಗಿದೆ.

4) ಸದಸ್ಯರೆಲ್ಲರೂ ಬ್ಯಾಂಕಿನಿಂದ ಪಡೆದಿರುವ ತಮ್ಮ ಗುರುತಿನ ಚೀಟಿಯನ್ನು ತಪ್ಪದೇ ತರಬೇಕಾಗಿ ವಿನಂತಿ. ಇದುವರೆವಿಗೂ ತಮ್ಮ ಗುರುತಿನ ಚೀಟಿಯನ್ನು ಪಡೆಯದೆ ಇರುವ ಸದಸ್ಯರು ಕೂಡಲೇ ತಮ್ಮ 2 ಪಾಸ್‌ಪೋರ್ಟ್ ಭಾವಚಿತ್ರಗಳನ್ನು ಸಲ್ಲಿಸಿ, ಗುರುತಿನ ಚೀಟಿಯನ್ನು ಪಡೆಯುವುದು.

5) ಷೇರು ಪ್ರಮಾಣ ಪತ್ರ ಪಡೆಯದೇ ಇರುವ ಸದಸ್ಯರು ಕೂಡಲೇ ಕಛೇರಿಗೆ ಬಂದು ಪಡೆಯಲು ಕೋರಿದೆ.

6) ಸದಸ್ಯರುಗಳು ತಮ್ಮ ಖಾತೆಗಳಿಗೆ ನಾಮ ನಿರ್ದೇಶನ ಮಾಡದೇ ಇದ್ದ ಪಕ್ಷದಲ್ಲಿ ಕೂಡಲೇ ಬಂದು ನಾಮಿನೇಷನ್ ಫಾರಂ ಸಲ್ಲಿಸಲು ಸೂಚಿಸಿದೆ.

7) ಸದಸ್ಯರು ತಮ್ಮ ಇ-ಮೇಲ್ ವಿಳಾಸ ಹಾಗೂ ಸದಸ್ಯರ ಮನೆ ವಿಳಾಸ, ದೂರವಾಣಿ ಮತ್ತು ಮೊಬೈಲ್ ಸಂಖ್ಯೆ ಬದಲಾವಣೆಯಾಗಿದ್ದಲ್ಲಿ ಬ್ಯಾಂಕಿಗೆ ಬಂದು ನೀಡುವುದು.

8) ನಮ್ಮ ಬ್ಯಾಂಕಿನ ತಮ್ಮ ಖಾತೆಗಳಿಗೆ ಇತ್ತೀಚಿನ ಭಾವಚಿತ್ರದೊಂದಿಗೆ ಸಂಬಂಧಪಟ್ಟ ಶಾಖೆಯನ್ನು ಸಂಪರ್ಕಿಸಿ, ಕತಮ್ಮ ಸಹಿಯನ್ನು ನವೀಕರಿಸುವುದು ಹಾಗೂ ಕೆ.ವೈ.ಸಿ (KYC) ದಾಖಲೆಗಳ ಪ್ರತಿಗಳನ್ನು ನೀಡುವುದು.

9) ಉಳಿತಾಯ/ಚಾಲ್ತಿ/ಠೇವಣಿ ಖಾತೆಗಳ ವಹಿವಾಟನ್ನು ನಿರಂತರವಾಗಿ ಮಾಡದಿದ್ದ ಪಕ್ಷದಲ್ಲಿ ತಮ್ಮ ಖಾತೆಗಳನ್ನು ಆರ್.ಬಿ.ಐ ನಿಯಮದ ಪ್ರಕಾರ ಖಾತೆಗಳು ಸ್ಥಗಿತಗೊಳ್ಳುವುದು ಅಥವಾ ಡಿ.ಇ.ಎ ಫಂಡ್ (DEA Fund) ಖಾತೆಗೆ ವರ್ಗಾಯಿಸಲಾಗುವುದು.

10) ಬ್ಯಾಂಕಿನ ಬೈಲಾ ಸಂಖ್ಯೆ 47 ರನ್ವಯ ಕಳೆದ 5 ಸಾಮಾನ್ಯ ಸಭೆಗಳ ಪೈಕಿ ಹಾಗೂ 2 ಸಾಮಾನ್ಯ ಸಭೆಗಳಿಗೆ ಹಾಜರಾಗಲು ತಪ್ಪುವ ಒಬ್ಬ ಸದಸ್ಯ 2 ನಿರಂತರ ಸಹಕಾರ ವರ್ಷಗಳಿಗೆ ಬ್ಯಾಂಕಿನ ಉಪವಿಧಿಗಳಲ್ಲಿ ಪ್ರತಿ ವರ್ಷದಲ್ಲಿ ಒಬ್ಬ ಸದಸ್ಯನು ಬಳಸಿಕೊಳ್ಳಲು ನಿರ್ದಿಷ್ಟ ಪಡಿಸಿದ ಕನಿಷ್ಠ ಸೇವೆಗಳನ್ನು ಅಥವ ಸೌಲಭ್ಯಗಳನ್ನು ಬಳಸಿಕೊಳ್ಳಲು ತಪ್ಪಿದ ಸದಸ್ಯನಿಗೆ ಮತ ನೀಡುವ ಹಕ್ಕು ಹಾಗೂ ಚುನಾವಣೆಯಲ್ಲಿ ಸ್ಪರ್ಧಿಸುವ ಹಕ್ಕು ಇರುವುದಿಲ್ಲ.

11) ಸಭೆಗೆ ಸದಸ್ಯರಿಗೆ ಮಾತ್ರ ಪ್ರವೇಶ.

12) ಸದಸ್ಯರುಗಳಿಗೆ ಲಘು ಉಪಹಾರ ವ್ಯವಸ್ಥೆ ಮಾಡಲಾಗಿದೆ.

********

ಗೆ,

--------------------------------------------------------------------

--------------------------------------------------------------------

--------------------------------------------------------------------

--------------------------------------------------------------------

ಅಂಚೆ ಬಟವಾಡೆಯಾಗದಿದ್ದಲ್ಲಿ ಈ ಕೆಳಕಂಡ ವಿಳಾಸಕ್ಕೆ ಹಿಂತಿರುಗಿಸಿ.

ಇಂದ,


**ದಿ ರಾಜಾಜಿನಗರ ಕೋ-ಆಪರೇಟಿವ್ ಬ್ಯಾಂಕ್ ಲಿ.,**

ಸಂ.741, 3ನೇ ವಿಭಾಗ, ರಾಜಾಜಿನಗರ, ಬೆಂಗಳೂರು-560010.

ಪ್ರಧಾನ ಕಛೇರಿ : ದೂರವಾಣಿ ಸಂ.080-23151204, 23152073